1ನೇ ಅಪರ ಮುಖ್ಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ
ಬೆಂಗಳೂರು ನಗರ

ಸಿ.ಸಿ. ನಂ. 31072-2018

ಸಿಡಬ್ಲೂ - 11ಪಿಡಬ್ಲೂ-2

| | | |
|---|---|---|
| ಸಾಕ್ಷಿದಾರರ ಹೆಸರು | : | ಸಾರ್ಥಿಕ |
| ತಂದೆಯ ಹೆಸರು | : | ಲಕ್ಷ್ಮಣೇಗೌಡ |
| ವಯಸ್ಸು | : | 35 ವರ್ಷ |
| ಕೆಲಸ | : | ಪಿಎಸ್ ಐ, ಕುಮಾರಸ್ವಾಮಿ ಲೇಔಟ್ ಪೋ ಠಾ |
| ವಾಸ | : | ಬೆಂಗಳೂರು |

ಸಾಕ್ಷಿಯನ್ನು ದಿನಾಂಕಃ 21-11-2025 ರಂದು ಕರೆಸಿ ಪ್ರಮಾಣ ಮಾಡಿಸಲಾಯಿತು.

ಮುಖ್ಯ ವಿಚಾರಣೆ ಹಿ.ಸ.ಸಾ.ಅ. ರವರಿಂದಃ

ನಾನು 2017 ರಿಂದ 2019 ರವರೆಗೆ ವೈಯಾಲಿಕಾವಲ್ ಪೋಲೀಸ್ ಠಾಣೆಯಲ್ಲಿ ಪಿ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ22-08-2018 ರಂದು ನಾನು ಠಾಣೆಯಲ್ಲಿದ್ದಾಗ ಚಾಸಾ 1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಆರೋಪಿಯ ವಿರುದ್ಧ ಪ್ರಕರಣ ದಾಖಲಿಸಿ, ಪ್ರಥಮ ವರ್ತಮಾನ ವರದಿಯನ್ನು ರಚಿಸಿ ಅದನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಇಲಾಖಾ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಯು ದೂರನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.2 ಎಂದು ಸಾಕ್ಷಿಯ ಸಹಿಯನ್ನು ನಿಪಿ.2ಎ ಎಂದು ಗುರುತಿಸಲಾಯಿತು. ಸಾಕ್ಷಿಯ ಸದರಿ ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.3 ಎಂದು ಹಾಗೂ ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.3ಎ ಎಂದು ಗುರುತಿಸಲಾಯಿತು. ನಂತರ ಕಡತವನ್ನು ಚಾಸಾ 12 ರವರಿಗೆ ವರ್ಗಾಯಿಸಿರುತ್ತೇನೆ.

ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ

ಆರೋಪಿಯ ವಿರುದ್ಧ ಸುಳ್ಳು ಎಫ್ ಐ ಆರ್ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಆರೋಪಿಯು ಯಾವುದೇ ತಪ್ಪು ಮಾಡಿಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು. ಸಾಕ್ಷಿಯ ಎದುರಿನಲ್ಲಿ ಓದಿ ಹೇಳಿದ ಮೇಲೆ ಸರಿ ಇದೆ ಎಂದು ಒಪ್ಪಿ ಸಹಿ ಮಾಡಲಾಯಿತು.)

ಓ ಹೇ ಕೇ ಸ ಇ ಒ

1 ನೇ ಅ. ಮು. ನ್ಯಾ.ದಂ. ನ್ಯಾ